# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತನಾಲ್ಕನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಮಂಗಳವಾರ, ದಿನಾಂಕ:21ನೇ ಸೆಪ್ಟೆಂಬರ್, 2021**

**(ಸಮಯ: ಬೆಳಗ್ಗೆ: 10.30 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಏಳನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಏಳನೆಯ ಪಟ್ಟಿ

## 2. ಸಭೆಯ ಮುಂದಿಡಲಾಗುವ ಕಾಗದ ಪತ್ರ

**ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಈ ಕೆಳಕಂಡ ವಿಧೇಯಕವನ್ನು ಕಾರ್ಯದರ್ಶಿಯವರು ಸಭೆಯ ಮುಂದಿಡುವುದು.**

ಕರ್ನಾಟಕ ಸ್ಥಳೀಯ ನಿಧಿ ಪ್ರಾಧಿಕಾರಗಳ ಆರ್ಥಿಕ ಹೊಣೆಗಾರಿಕೆ (ತಿದ್ದುಪಡಿ) ವಿಧೇಯಕ, 2021

## 03. ವರದಿಯನ್ನೊಪ್ಪಿಸುವುದು

**ಶ್ರೀ ಕೆ.ಎ.ತಿಪ್ಪೇಸ್ವಾಮಿ (ಸದಸ್ಯರು, ಅಧೀನ ಶಾಸನ ರಚನಾ ಸಮಿತಿ )** ಅವರು 2020-21ನೇ ಸಾಲಿನ ಕರ್ನಾಟಕ ವಿಧಾನ ಮಂಡಲದ ಅಧೀನ ಶಾಸನ ರಚನಾ ಸಮಿತಿಯ 51ನೇ ವರದಿಯನ್ನೊಪ್ಪಿಸುವುದು.

## 4. ಶಾಸನ ರಚನೆ

**ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

ಕರ್ನಾಟಕ ಸ್ಥಳೀಯ ನಿಧಿ ಪ್ರಾಧಿಕಾರಗಳ ಆರ್ಥಿಕ ಹೊಣೆಗಾರಿಕೆ (ತಿದ್ದುಪಡಿ) ವಿಧೇಯಕ, 2021

**ಶ್ರೀ ಬಸವರಾಜ ಬೊಮ್ಮಾಯಿ ( ಮಾನ್ಯ ಮುಖ್ಯಮಂತ್ರಿಗಳು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2021ನೇ ಸಾಲಿನ "ಕರ್ನಾಟಕ ಸ್ಥಳೀಯ ನಿಧಿ ಪ್ರಾಧಿಕಾರಗಳ ಆರ್ಥಿಕ ಹೊಣೆಗಾರಿಕೆ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 05. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

**ಶ್ರೀಮತಿ ಭಾರತಿ ಶೆಟ್ಟಿ ಹಾಗೂ ಡಾ. ವೈ.ಎ. ನಾರಾಯಣಸ್ವಾಮಿ** ಅವರುಗಳು } ರಾಜ್ಯದಲ್ಲಿ ಮಕ್ಕಳು ಹಾಗೂ ಮಹಿಳೆಯರ ಮೇಲೆ ನಡೆಯುತ್ತಿರುವ ಅತ್ಯಾಚಾರ ಪ್ರಕರಣಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಅಗತ್ಯ ಕ್ರಮವಹಿಸುವ ಕುರಿತು.

## 06. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಮರಿತಿಬ್ಬೇಗೌಡ** ಅವರು ಮೈಸೂರು ಅಭಿವೃದ್ಧಿ ಪ್ರಾಧಿಕಾರವು ಬಡಾವಣೆ ರಚಿಸುವಾಗ ಭೂಸ್ವಾಧೀನಪಡಿಸಿಕೊಳ್ಳದೆ ಇರುವ ಪ್ರದೇಶವನ್ನು ಬಳಕೆ ಮಾಡಿಕೊಂಡು ನಿಯಮಾವಳಿಗಳನ್ನು ಉಲ್ಲಂಘಿಸಿರುವ ಕುರಿತು ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

02. **ಶ್ರೀ ಎಂ.ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು** ಅವರು ಸುವರ್ಣ ಗ್ರಾಮೋದಯ ಯೋಜನೆಯನ್ನು ಜಾರಿಗೆ ತಂದು ಸರ್ವತೋಮುಖ ಅಭಿವೃದ್ಧಿಗೆ ಮೀಸಲಿಟ್ಟ ಹಣವನ್ನು ಕೆ.ಆರ್.ಐ.ಡಿ.ಎಲ್.ನ ಅಧಿಕಾರಿಗಳು ದುರ್ಬಳಕೆ ಮಾಡುತ್ತಿರುವ ಕುರಿತು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

03. **ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ, ಮಾನ್ಯ ಸರ್ಕಾರಿ ಮುಖ್ಯ ಸಚೇತಕರು.** ಅವರು ಕೃಷ್ಣಾ ನದಿ ಹಾಗೂ ಉಪನದಿಗಳ ನೆರೆ ಹಾವಳಿಯಿಂದ ಬೆಳಗಾವಿ ಜಿಲ್ಲೆಯಲ್ಲಿನ ಪ್ರವಾಹ ಪೀಡಿತ ಪ್ರದೇಶಗಲ್ಲಿನ ಬ್ರಿಡ್ಜ್, ಬ್ಯಾರೆಜ್‌ಗಳು ಮತ್ತು ಪೂರಕ ರಸ್ತೆಗಳು ಹಾನಿಗೊಳಗಾಗಿದ್ದು, ಅವುಗಳನ್ನು ಪುನರ್ ನಿರ್ಮಾಣ ಮಾಡುವ ಕುರಿತು ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

## 07. ನಿಯಮ 330ರ ಮೇರೆಗೆ

01. **ಶ್ರೀಯುತರುಗಳಾದ ಎಸ್.ಎಲ್.ಭೋಜೇಗೌಡ, ಕೆ.ಟಿ.ಶ್ರೀಕಂಠೇಗೌಡ ಮತ್ತು ಕೆ.ಎ. ತಿಪ್ಪೇಸ್ವಾಮಿ** ಅವರುಗಳು ಮೈಸೂರು ನಗರ ಮತ್ತು ಗ್ರಾಮಾಂತರಗಳ ಸ್ಥಳೀಯ ಸಂಸ್ಥೆಗಳ ಮೂಲಕ ಪರಿಸರ ಸ್ನೇಹಿ ಬಟ್ಟೆ ಬ್ಯಾಗ್‌ಗಳನ್ನು ಸ್ಥಳೀಯ ಸಂಸ್ಥೆಗಳಿಂದ ಅನುಮೋದನೆ ಪಡೆಯದೆ ದುಬಾರಿ ದರದಲ್ಲಿ ಖರೀದಿಸಿರುವುದರಿಂದ ಸರ್ಕಾರದ ಬೊಕ್ಕಸಕ್ಕೆ ಕೋಟ್ಯಾಂತರ ರೂಪಾಯಿ ನಷ್ಟವಾಗಿರುವ ಕುರಿತು ಪ್ರಸ್ತಾಪಿಸುವುದು.

02. **ಡಾ. ವೈ.ಎ. ನಾರಾಯಣಸ್ವಾಮಿ** ಅವರು ಬೆಂಗಳೂರು ಉತ್ತರ ತಾಲ್ಲೂಕಿನ ಜಾಗಲಟ್ಟಿ ಗ್ರಾಮದ ಸರ್ವೆ ನಂ:83ರಲ್ಲಿ ಕೆಲವು ಭೂಗಳ್ಳರು ಕೆರೆಯ ಮಧ್ಯಭಾಗದಲ್ಲಿ ರಸ್ತೆಯನ್ನು ನಿರ್ಮಿಸಿ ಕೆರೆಯ ಸ್ವರೂಪವನ್ನು ವಿರೂಪಗೊಳಿಸಿ ಭೂಕಬಳಿಕೆ ಮಾಡಿರುವ ಗಂಭೀರ ವಿಷಯದ ಕುರಿತು ಪ್ರಸ್ತಾಪಿಸುವುದು.

03. **ಶ್ರೀ ಎಸ್.ವ್ಹಿ. ಸಂಕನೂರ** ಅವರು ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘದ 6 ಜನ ಖಾಯಂ ಸಿಬ್ಬಂದಿಗಳು ಪಿಂಚಣಿ ಹಾಗೂ ಇತರೆ ಸೌಲಭ್ಯಗಳಿಂದ ವಂಚಿತರಾಗಿರುವುದರ ಕುರಿತು ಪ್ರಸ್ತಾಪಿಸುವುದು.

೦4. **ಶ್ರೀಯುತರುಗಳಾದ ಬಿ.ಕೆ. ಹರಿಪ್ರಸಾದ್, ಮರಿತಿಬ್ಬೇಗೌಡ ಹಾಗೂ ನಸೀರ್ ಅಹಮದ್** ಅವರುಗಳು ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯು "ನೆರೆ-ಹೊರೆಯಲ್ಲಿ ಸಮಾನ ಶಿಕ್ಷಣ ನೀತಿ" ಎಂಬ ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿರುವ ಬಗ್ಗೆ ಪ್ರಸ್ತಾಪಿಸುವುದು.

## 08. ಅರ್ಧ ಗಂಟೆ ಕಾಲಾವಧಿ ಚರ್ಚೆ

೦1. ರಾಷ್ಟ್ರೀಯ ಸ್ವಚ್ಛಗಾಳಿ ಕಾರ್ಯಕ್ರಮದಡಿ ರಾಜ್ಯದ ನಗರಗಳನ್ನು ಗುರುತಿಸಿ ನಿರ್ದಿಷ್ಟ ಕ್ರಿಯಾ ಯೋಜನೆಯನ್ನು ರೂಪಿಸುವ ಕುರಿತು ದಿನಾಂಕ:13.09.2021ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:06(237)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಕೆ.ಸಿ. ಕೊಂಡಯ್ಯ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

೦2 ಮೈಸೂರು ಲ್ಯಾಂಪ್ಸ್ ಕಾರ್ಖಾನೆಯ ಆಸ್ತಿಯನ್ನು ಖಾಸಗಿ ಟ್ರಸ್ಟ್‌ಗೆ ನೀಡಿರುವ ಕುರಿತು ದಿನಾಂಕ:14.09.2021ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:20(325)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಕಾಂತರಾಜು (ಬಿಎಂಎಲ್)** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

೦3 ರಾಜ್ಯದ ರೈತರ ಕೃಷಿ ಆದಾಯವನ್ನು ದ್ವಿಗುಣಗೊಳಿಸುವ ಯೋಜನೆ ಕುರಿತು ದಿನಾಂಕ:17.09.2021ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:63(712)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಕೆ.ಎ. ತಿಪ್ಪೇಸ್ವಾಮಿ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**